ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ, ದಿನಾಂಕ: 18ನೇ ಜುಲೈ, 2019

ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಬರಬೇಕಾದ ಬಾಕಿ ಹಣದ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) -

58 (344) ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) 2018-19ನೇ ಸಾಲಿನ ಮಾರ್ಚ್ ಅಂತ್ಯಕ್ಕೆ ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ನೀಡಬೇಕಾಗಿರುವ ಒಟ್ಟು ಬಾಕಿ ಮೊತ್ತವೆಷ್ಟು ; (ಕಾರ್ಖಾನೆವಾರು ಮಾಹಿತಿ ನೀಡುವುದು)

(ಆ) ಸಕ್ಕರೆ ಕಾರ್ಖಾನೆಗಳು ರೈತರಿಗೆ ಸಕಾಲಕ್ಕೆ ಕಬ್ಬಿನ ಬಾಕಿ ಹಣವನ್ನು ನೀಡದೆ ರೈತರು ಸಾಲದ ಸುಳಿಗೆ ಸಿಲುಕಿ ಆತ್ಮಹತ್ಯೆಯ ದಾರಿ ಹಿಡಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರೈತರಿಗೆ ಸಕಾಲದಲ್ಲಿ ಬಾಕಿ ಹಣವನ್ನು ದೊರಕಿಸಿ ಕೊಡುವ ಬಗ್ಗೆ ಸರ್ಕಾರ ಕೈಗೊಂಡ ಅಗತ್ಯ ಕ್ರಮಗಳೇನು ?